**ಸಾಕ್ಷಿಯನ್ನು ದಿಃ 20.01.2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಎಸ್ ಎಲ್ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ ಮತ್ತು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ನಿಪಿ. 1 ಎಂದು, ದೂರಿನ ಯಥಾ ನಕಲನ್ನು ನಿಪಿ. 2 ಎಂದು, ಸ್ಥಳ ಪಂಚನಾಮೆಯ ಯಥಾ ನಕಲನ್ನು ನಿಪಿ. 3 ಎಂದು, ಕಚ್ಚಾ ನಕ್ಷೆಯ ಯಥಾ ನಕಲನ್ನು ನಿಪಿ. 4 ಎಂದು, ಎಂವಿಐ ವರದಿಯ ಯಥಾ ನಕಲನ್ನು ನಿಪಿ. 5 ಎಂದು, ವಾಹನ ಅಮಾನತ್ತು ಪಂಚನಾಮೆಯ ಯಥಾ ನಕಲನ್ನು ನಿಪಿ. 6 ಎಂದು, ವಾಹನಗಳ ಫೋಟೋಗಳ ಯಥಾ ಪ್ರತಿಯನ್ನು ನಿಪಿ. 7 ಎಂದು, ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ನಿಪಿ. 8 ಎಂದು, ಜೆ ಎಸ್ ಎಸ್ ಆಸ್ಪತ್ರೆಯ ದಾಖಲೆ ನಿಪಿ. 9 ಎಂದು, ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ನಿಪಿ. 10 ಎಂದು, ಸಿಸಿ 2881/2018 ರ ಪ್ರಕರಣದ ಆರ್ಡರ್ ಶೀಟ್ ನ ದೃಢೀಕೃತ ಪ್ರತಿಯನ್ನು ನಿಪಿ. 11 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಪ್ರಧಾನ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.